# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 739
ಸದಸ್ಯರ ಹೆಸರು : ಶ್ರೀ ಬಿ.ಎಂ. ಫಾರೂಕ್
ಉತ್ತರಿಸಬೇಕಾದ ದಿನಾಂಕ : 22.02.2022
ಉತ್ತರಿಸಬೇಕಾದ ಸಚಿವರು : ನಗರಾಭಿವೃದ್ಧಿ ಸಚಿವರು

| | ಪ್ರಶ್ನೆ | ಉತ್ತರ |
|---|---|---|
| ಅ) | ಇತ್ತೀಚೆಗೆ ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಪಚ್ಚನಾಡಿ ಡಂಪಿಂಗ್ ಯಾರ್ಡ್ ಪರಿಸರದಲ್ಲಿ ಭಾರಿ ಬೆಂಕಿ ಬಿದ್ದಿರುವುದರಿಂದ ಸ್ಥಳೀಯರು ಆತಂಕಗೊಂಡಿರುವುದು ನಿಜವೇ; | ಹೌದು.<br><br>ಇತ್ತೀಚೆಗೆ ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಪಚ್ಚನಾಡಿ ಘನತ್ಯಾಜ್ಯ ವಿಲೇವಾರಿಯ ನೆಲಭರ್ತಿ ಜಾಗದಲ್ಲಿ ತ್ಯಾಜ್ಯದ ಒಳ ಉಷ್ಣಾಂಶ ಹೆಚ್ಚಾದ ಕಾರಣ ಹಳೆಯ ಪಾರಂಪರಿಕ ತ್ಯಾಜ್ಯದಿಂದ 2 ಬಾರಿ ಕಾಣಿಸಿಕೊಂಡ ಬೆಂಕಿಯನ್ನು ಪಾಲಿಕೆ ವತಿಯಿಂದ ಹಾಗೂ ಅಗ್ನಿ ಶಾಮಕ ದಳದ ಸಹಾಯ ಪಡೆದು ಬೆಂಕಿಯನ್ನು ಸಂಪೂರ್ಣವಾಗಿ ನಂದಿಸಲಾಗಿದೆ. |
| ಆ) | ಮಹಾನಗರ ಪಾಲಿಕೆ ವ್ಯಾಪ್ತಿಯಷ್ಟೇ ಅಲ್ಲದೆ ಹೊರಭಾಗದ ತ್ಯಾಜ್ಯವನ್ನು ಕೂಡ ಇಲ್ಲೇ ತಂದು ಸುರಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ.<br><br>ಉಳ್ಳಾಲ ನಗರ ಸಭೆ, ಕೋಟೆಕಾರು ಪಟ್ಟಣ ಪಂಚಾಯತಿ ಮತ್ತು ಇತರ ಖಾಸಗಿ ಸಂಸ್ಥೆಗಳ ಮನವಿಯ ಮೇರೆಗೆ ತಾತ್ಕಾಲಿಕವಾಗಿ ನಿಗಧಿಪಡಿಸಲಾಗಿರುವ ಶುಲ್ಕ ಪಾವತಿಸಿಕೊಂಡು ವಿಂಗಡಿಸಿದ ತ್ಯಾಜ್ಯವನ್ನು ಮಾತ್ರ ಪಚ್ಚನಾಡಿಯ ತ್ಯಾಜ್ಯ ನಿರ್ವಹಣಾ ಘಟಕದಲ್ಲಿ ವಿಲೇವಾರಿ ಮಾಡಲು ಅನುಮತಿ ನೀಡಲಾಗಿರುತ್ತದೆ. |
| ಇ) | ಪ್ರತಿ ವರ್ಷ ಬಿಸಿಲಿನ ಪ್ರಖರತೆಗೆ ಸದರಿ ಡಂಪಿಂಗ್ ಯಾರ್ಡ್ ನಲ್ಲಿ ಬೆಂಕಿ ಬೀಳುತ್ತಿರುವುದರಿಂದ, ದಟ್ಟ ಹೊಗೆ ಹಾಗೂ ವಾಸನೆಯಿಂದ ಜನರು ಕಂಗೆಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ.<br><br>ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಪಚ್ಚನಾಡಿ ಘನತ್ಯಾಜ್ಯ ವಿಲೇವಾರಿಯ ನೆಲಭರ್ತಿ ಜಾಗದಲ್ಲಿ ತ್ಯಾಜ್ಯದ ಒಳ ಉಷ್ಣಾಂಶ ಹೆಚ್ಚಾದ ಸಂದರ್ಭದಲ್ಲಿ ಈ ಹಿಂದೆ ಕೆಲವೊಮ್ಮೆ ಬೆಂಕಿ ಕಾಣಿಸಿಕೊಂಡಾಗ ಪಾಲಿಕೆಯ ವತಿಯಿಂದ ಕೂಡಲೇ ಬೆಂಕಿಯ ತೀವ್ರತೆಯನ್ನು ಕಡಿಮೆಗೊಳಿಸಲು ಅಗತ್ಯ ಕ್ರಮ ಕೈಗೊಳ್ಳುವುದರ ಜೊತೆಗೆ ಅಗ್ನಿ ಶಾಮಕ ದಳದ ಸಹಾಯ ಪಡೆದು ಬೆಂಕಿಯನ್ನು ಸಂಪೂರ್ಣವಾಗಿ ನಂದಿಸಲಾಗಿರುತ್ತದೆ. ಇತ್ತೀಚೆಗೆ ಯಾವುದೇ ತೀವ್ರವಾದ ಬೆಂಕಿ ಅವಘಡಗಳು ಸಂಭವಿಸಿರುವುದಿಲ್ಲ. |

| | | |
|---|---|---|
| ಈ) | ಹೌದಾದಲ್ಲಿ ಈ ಸಂಬಂಧ ಸರ್ಕಾರ ಕೈಗೊಳ್ಳುವ ಕ್ರಮಗಳಾವುವು? | • ಮಂಗಳೂರು ಮಹಾನಗರ ಪಾಲಿಕೆಯ ವತಿಯಿಂದ ನೆಲಭರ್ತಿ ಜಾಗದಲ್ಲಿ ದಿನದ 24 ಗಂಟೆಗಳಲ್ಲಿ ಕಾವಲುಗಾರರನ್ನು ನೇಮಿಸಲಾಗಿದ್ದು, ಸಿ.ಸಿ. ಟಿವಿ ಕ್ಯಾಮರಾಗಳನ್ನು ಅಳವಡಿಸಿ ಪಾಲಿಕೆಯ ನಿಯಂತ್ರಣ ಕೊಠಡಿಯಿಂದ ಪರಿಶೀಲಿಸಲಾಗುತ್ತಿದೆ.<br>• ಆಕಸ್ಮಿಕವಾಗಿ ಸಂಭವಿಸಿದ ಬೆಂಕಿಯನ್ನು ನಂದಿಸಲು ಸ್ವಚ್ಛಭಾರತ್ ಮಿಷನ್ ಮತ್ತು ಪಾಲಿಕೆಯ ಅನುದಾನದಿಂದ FIRE EXTINGUISHERS / FIRE HYDRANTS ಮತ್ತು ನೀರಿನ ಟ್ಯಾಂಕರ್ ಗಳ ವ್ಯವಸ್ಥೆ ಹಾಗೂ ಇತರೆ ಅವಶ್ಯಕ ಸುರಕ್ಷಾ ಪರಿಕರಗಳ ವ್ಯವಸ್ಥೆಯನ್ನು ಈಗಾಗಲೇ ಪಾಲಿಕೆಯ ವತಿಯಿಂದ ಮಾಡಲಾಗಿದೆ.<br>• ಪಚ್ಚನಾಡಿ ಘನತ್ಯಾಜ್ಯ ಸಂಸ್ಕರಣಾ ಮತ್ತು ವಿಲೇವಾರಿ ಜಾಗದಲ್ಲಿ ಸಂಪೂರ್ಣವಾದ ಅಗ್ನಿ ಸುರಕ್ಷತಾ ಕ್ರಮಗಳನ್ನು ಅಳವಡಿಸಲು ವಿಸ್ತೃತ ಯೋಜನಾ ವರದಿ ಸಿದ್ಧಪಡಿಸಲಾಗುತ್ತಿದೆ.<br>• ನೆಲಭರ್ತಿ ಜಾಗದಲ್ಲಿ ಪಾರಂಪರಿಕ ತ್ಯಾಜ್ಯದ ನಿರ್ವಹಣೆಗಾಗಿ (LEGACY WASTE MANAGEMENT THROUGH BIO-MINING AND BIO REMEDIATION) ಈಗಾಗಲೇ ಟೆಂಡರ್ ಕರೆದಿದ್ದು, ಪ್ರಕ್ರಿಯೆಯು ಅಂತಿಮ ಹಂತದಲ್ಲಿರುತ್ತದೆ. |

ನಅಇ 13 ಎಂಎಂಸಿ 2022 (ಇ)

(ಬಿ.ಎ. ಬಸವರಾಜ)
ನಗರಾಭಿವೃದ್ಧಿ ಸಚಿವರು

(ಬಿ.ಎ. ಬಸವರಾಜ)
ನಗರಾಭಿವೃದ್ಧಿ ಸಚಿವರು